ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

**ಕರ್ನಾಟಕ ವಿಧಾನ ಪರಿಷತ್ತು**

ನೂರ ನಲವತ್ತಮೂರನೆಯ ಅಧಿವೇಶನ

ಮಂಗಳವಾರ, ದಿನಾಂಕ: 2ನೇ ಫೆಬ್ರುವರಿ, 2021

ಯು.ಜಿ.ಡಿ. ಮತ್ತು ಕುಡಿಯುವ ನೀರಿನ ಕಾಮಗಾರಿಗಳ ಕುರಿತು

ಶ್ರೀ ಎನ್.ರವಿಕುಮಾರ್ (ವಿಧಾನ ಸಭೆಯಿಂದ ಚುನಾಯಿತರಾದವರು) :-

221(241) ಮಾನ್ಯ ನಗರಾಭಿವೃದ್ಧಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ರಾಜ್ಯದ ಎಷ್ಟು ನಗರಗಳಲ್ಲಿ ಯು.ಜಿ.ಡಿ. ಮತ್ತು ಕುಡಿಯುವ ನೀರಿನ ಕಾಮಗಾರಿಗಳನ್ನು ಕೈಗೊಳ್ಳಲಾಗಿದೆ ಕಳೆದ 3 ವರ್ಷಗಳಲ್ಲಿ ಎಷ್ಟು ಕಾಮಗಾರಿಗಳು ಅನುಷ್ಠಾನಗೊಂಡಿವೆ ; ಎಷ್ಟು ಕಾಮಗಾರಿಗಳು ಮುಕ್ತಾಯಗೊಂಡಿವೆ ; (ಜಿಲ್ಲಾವಾರು ವಿವರ ನೀಡುವುದು)

(ಆ) ರಾಜ್ಯದ ನಗರಗಳಲ್ಲಿ ಯು.ಜಿ.ಡಿ ಮತ್ತು ಕುಡಿಯುವ ನೀರಿನ ಕಾಮಗಾರಿಗಳಿಗಾಗಿ ಅಗೆದು ಹಾಳು ಮಾಡಲಾದ ರಸ್ತೆಗಳನ್ನು ರಿಪೇರಿ ಮಾಡದಿರಲು ಕಾರಣಗಳೇನು ; ಎಷ್ಟು ನಗರಗಳ ರಸ್ತೆಯನ್ನು ರಿಪೇರಿ ಮಾಡಲಾಗಿದೆ ; ಅದಕ್ಕೆ ತಗಲುವ ವೆಚ್ಚವೆಷ್ಟು ; (ಜಿಲ್ಲಾವಾರು ಮಾಹಿತಿ ನೀಡುವುದು)

(ಇ) ಯು.ಜಿ.ಡಿ. ಮತ್ತು ಕುಡಿಯುವ ನೀರಿನ ಕಾಮಗಾರಿಗಳಲ್ಲಿ ಭ್ರಷ್ಟಾಚಾರ ನಡೆದಿರುವ ಕುರಿತು ಹಾಗೂ ಕಳಪೆ ಕಾಮಗಾರಿಗಳ ಕುರಿತು ಎಷ್ಟು ದೂರುಗಳು ಇದುವರೆಗೆ ದಾಖಲಾಗಿವೆ ?